**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 198 ಕೆಎಸ್ಎಸ್ 2017

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು. ದಿನಾಂಕ :24.11.2018.

## ಅಧಿಸೂಚನೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಈ ಕೆಳಕಂಡ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ)ಗಳಿಗೆ ಕರ್ನಾಟಕ ನಾಗರೀಕ ಸೇವಾ (ಮುಂಬಡ್ತಿ, ವೇತನ ಮತ್ತು ಪಿಂಚಣಿ ಕ್ರಮಬದ್ಧತೆ) ನಿಯಮಾವಳಿಗಳು 1978ರ ನಿಯಮ 2(1)(ಎ) ಮತ್ತು ನಿಯಮ 2(2) ರನ್ವಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವೃಂದದಲ್ಲಿ ಜೇಷ್ಠತೆಯಲ್ಲಿ ಇವರುಗಳಿಗಿಂತ ಕಿರಿಯರಾದವರಿಗೆ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಗೆ ಮುಂಬಡ್ತಿ ನೀಡಿದ ದಿನಾಂಕ:03.09.2015 ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಹಿಂದಿನ ವೇತನ ಶ್ರೇಣಿ ರೂ.22800 – 43200 ರಲ್ಲಿ ಪ್ರಸಕ್ತ ವೇತನ ಶ್ರೇಣಿ ರೂ.43100 – 83900 ರಲ್ಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಹಾಗೂ ಸ್ಥಳಗಳಲ್ಲಿಯೇ ಮುಂದುವರೆಸಿ ಆದೇಶಿಸಿದೆ.

ಈ ಕೆಳಕಂಡ ಅಧಿಕಾರಿಗಳು ನಿಯಮಾನುಸಾರ ಲಭ್ಯವಿರುವ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ. ಈ ಅಧಿಸೂಚನೆಯನ್ನು ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 46 ಸಿಎನ್ಎಸ್ 18, ದಿನಾಂಕ:14.08.2018 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಿದೆ.

| ಕ್ರಮ ಸಂ. | ಅಧಿಕಾರಿಯ ಹೆಸರು ಮತ್ತು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆ | ಜಿಲ್ಲಾ ಪಂಚಾಯಿತಿ |
|---|---|---|
| 1 | ಶ್ರೀ ನವೀನ್‌ಕುಮಾರ್ ಭಂಡಾರಿ, ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ ಪುತ್ತೂರು, ದಕ್ಷಿಣ ಕನ್ನಡ ಜಿಲ್ಲೆ. | ಜಿಲ್ಲಾ ಪಂಚಾಯತ್ ದಕ್ಷಿಣ ಕನ್ನಡ ಜಿಲ್ಲೆ |
| 2 | ಶ್ರೀ ಅಜಯ್ ಎನ್ ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ ಕುಂದಗೋಳ ಧಾರವಾಡ ಜಿಲ್ಲೆ. | ಜಿಲ್ಲಾ ಪಂಚಾಯತ್ ಧಾರವಾಡ |
| 3 | ಶ್ರೀ ಗಗನ್ ಎ.ಎಸ್. ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ) ತಾಲ್ಲೂಕು ಪಂಚಾಯಿತಿ ಆಲೂರು, ಹಾಸನ ಜಿಲ್ಲೆ. | ಜಿಲ್ಲಾ ಪಂಚಾಯತ್ ಹಾಸನ |
| 4 | ಪರೀಶ್ ಜೆ.ಆರ್. ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ) ತಾಲ್ಲೂಕು ಪಂಚಾಯಿತಿ ಹಾಸನ, ಹಾಸನ ಜಿಲ್ಲೆ. | ಜಿಲ್ಲಾ ಪಂಚಾಯತ್ ಹಾಸನ |

ಹೊರಡಿಸಿದೆ
...........................ದಿನಾಂಕ
... ಪಂ ರಾಜ್ ಇಲಾಖೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
24/11/18
(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ,
(ಸೇವೆಗಳು ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು ( ಎ ಮತ್ತು ಇ ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ/ ಧಾರವಾಡ/ ಹಾಸನ.

2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಪುತ್ತೂರು/ಕುಂದಗೋಳ/ಆಲೂರು/ಹಾಸನ
3. ಉಪ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
4. ಸಂಬಂಧಿಸಿದ ಅಧಿಕಾರಿಗಳಿಗೆ
5. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) / ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.